ಇ) ಹಾಗಿಲ್ಲದಿದ್ದಲ್ಲಿ ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಶರಣ ಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):

ಅ) ಹಿರೇಕೆರೂರು ತಾಲ್ಲೂಕು ಹಳ್ಳೂರಿನಲ್ಲಿ ಒಂದು 33:11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಗುರುತಿಸಿದ್ದು, ಈ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಆ) ಇಲ್ಲ.

ಇ) ಭೂಸ್ವಾಧೀನ ಪ್ರಸ್ತಾವನೆಯನ್ನು ಮಂಡಳಿಯು ಅನುಮೋದಿಸಿದ ನಂತರ ಹಣ ಬಿಡುಗಡೆ ಮಾಡಲು ಕ್ರಮ ಜರುಗಿಸಲಾಗುವುದು.

ವಿಷಯ: ಹಿರೇಕೆರೂರು ತಾಲ್ಲೂಕು ರಟ್ಟಿಹಳ್ಳಿಯಲ್ಲಿ 110 ಕೆ.ವಿ. ಗ್ರಿಡ್ ಸ್ಥಾಪನೆ.

868 (1224)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೇಕೆರೂರು ತಾಲ್ಲೂಕು ರಟ್ಟಿಹಳ್ಳಿಯಲ್ಲಿ 110 ಕೆ.ವಿ. ಗ್ರಿಡ್ ಸ್ಥಾಪನೆ ಕೆಲಸ ಯಾವ ಹಂತದಲ್ಲಿದೆ.

ಆ) ಈಗ ಗ್ರಿಡ್ ಇರುವ ಜಾಗದಲ್ಲಿಯೇ ಸ್ಥಾಪಿಸಲು ನಿರ್ಧರಿಸಲಾಗಿದೆಯೇ.

ಇ) ಹಾಗಿದ್ದಲ್ಲಿ ಈ ಯೋಜನೆ ಬಗ್ಗೆ ಹಾಕಿಕೊಂಡ ವೇಳಾಪಟ್ಟಿ ಏನು?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):

ಅ) ರಟ್ಟಿಹಳ್ಳಿಯಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 110 ಕೆ.ವಿ. ವಿದ್ಯುತ್ ಕೇಂದ್ರದ ಕೆಲಸಕ್ಕೆ ಸಂಬಂಧಪಟ್ಟಂತೆ 110 ಕೆ.ವಿ. ಪ್ರಸರಣಾ ಮಾರ್ಗದ ಸರ್ವೇ ಕೆಲಸವು ಈಗಾಗಲೇ ಮುಗಿದಿದೆ. ಸ್ಟೇಷನ್ ಕೆಲಸವನ್ನು ಪ್ರಾರಂಭಿಸಲು ಪೂರ್ವಭಾವಿ ಸಿದ್ಧತೆಗಳನ್ನು ನಡೆಸಲಾಗುತ್ತಿದೆ.

ಆ) ಈಗ ಹಾಲೀ ಇರುವ 33. ಕೆ.ವಿ. ಉಪ ಕೇಂದ್ರದ ಸ್ಥಳದಲ್ಲಿಯೇ 110 ಕೆ.ವಿ. ಉಪಕೇಂದ್ರವನ್ನು ಸ್ಥಾಪಿಸುವ ಬಗ್ಗೆ ವಿವರವಾಗಿ ಪರಿಶೀಲಿಸಲಾಗುತ್ತಿದ್ದು, ಸೂಕ್ತ ತೀರ್ಮಾನವನ್ನು ಆದಷ್ಟು ಜಾಗ್ರತೆ ತೆಗೆದುಕೊಳ್ಳಲಾಗುವುದು.

ಇ) ಈ ಸದರಿ ವಿದ್ಯುತ್ ಉಪ ಕೇಂದ್ರದ ನಿರ್ಮಾಣ ಕಾರ್ಯವನ್ನು 1999ನೇ

ಸಾಲಿನ ಅಂತ್ಯದ ವೇಳೆಗೆ ಪೂರ್ಣಗೊಳಿಸಲು ಉದ್ದೇಶಿಸಿದೆ.

ವಿಷಯ: ಹೊಸದುರ್ಗ ತಾಲ್ಲೂಕಿನಲ್ಲಿ ಹೊಸ ಆರಕ್ಷಕ ಠಾಣೆಗಳು.

869 (1214)

ಶ್ರೀ ಟಿ.ಹೆಚ್.ಬಸವರಾಜು (ಹೊಸದುರ್ಗ): ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದುರ್ಗ ತಾಲ್ಲೂಕಿನಲ್ಲಿ ಮೊಡದಕೆರೆಯು ಹೋಬಳಿ ಕೇಂದ್ರವಾಗಿದ್ದು ಮತ್ತು ತಾಲ್ಲೂಕಿನ ಗಡಿ ಭಾಗದಲ್ಲಿದ್ದು, ಒಂದು ಹೊಸ ಪೋಲೀಸ್ ಠಾಣೆಯನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು.

ಶ್ರೀ ಆರ್.ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ: ಬಾದಾಮಿ ಮತ ಕ್ಷೇತ್ರಕ್ಕೆ ಮಲಪ್ರಭಾ ಎಡದಂಡೆ ಕಾಲುವೆ

870 (1230)

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ಬಾದಾಮಿ): ಮಾನ್ಯ ಭಾರಿ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ಮತಕ್ಷೇತ್ರದ ಮಲಪ್ರಭಾ ಎಡದಂಡೆ ಕಾಲುವೆ ಮುಖಾಂತರ ನೀರು ಹರಿಯುವ ಪ್ರಮಾಣ ಎಷ್ಟು?

ಆ) ಕಾಲುವೆ ದುರಸ್ತಿಯಿಂದ ಪೂರ್ಣ ಪ್ರಮಾಣದ ನೀರನ್ನು ಬಿಡಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಅಚ್ಚುಕಟ್ಟು ಪ್ರದೇಶದ ರೈತರಿಗೆ ತೊಂದರೆ ನಿವಾರಿಸಲು ಕಾಲುವೆ ರಿಪೇರಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದಲ್ಲಿ 1998-99ನೇ ಸಾಲಿನಲ್ಲಿ ಕಾಲುವೆ ದುರಸ್ತಿಗೆ ನಿರ್ದಿಷ್ಟವಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗುತ್ತದೆ?